(4)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE: 19/12/20

# ಪರಿಷತ್ ಕಾರ್ಯದರ್ಶಿಗೆ ಸಭಾಪತಿ ನೋಟಿಸ್

ಉ.ವಾ. 19-12-20

**ಬೆಂಗಳೂರು:** ವಿಧಾನಪರಿಷತ್‌ನಲ್ಲಿ ಡಿ.15 ರಂದು ನಡೆದ ವಿದ್ಯಮಾನಗಳಿಗೆ ಸಂಬಂಧಿಸಿದಂತೆ ಕರ್ತವ್ಯ ಲೋಪ ಆರೋಪದ ಮೇಲೆ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮಿ ಅವರಿಗೆ ಸಭಾಪತಿ ಶೋಕಾಸ್ ನೋಟಿಸ್ ನೀಡಿದ್ದಾರೆ.

ಬುಧವಾರವೇ ನೋಟಿಸ್ ನೀಡಲಾಗಿದ್ದು 48 ಗಂಟೆಗಳಲ್ಲಿ ಉತ್ತರಿಸುವಂತೆ ಸೂಚಿಸಲಾಗಿದೆ. ಪ್ರಕರಣ ನ್ಯಾಯಾಲಯದ ಮೆಟ್ಟಿಲು ಏರಿದರೆ ಅದಕ್ಕೆ ತಕ್ಕಂತೆ ದಾಖಲೆ ಸಿದ್ಧಪಡಿಸುವ ನಿಟ್ಟಿನಲ್ಲಿ ಸಭಾಪತಿ ಮುಂದಾಗಿದ್ದಾರೆಂದು ಹೇಳಲಾಗಿದೆ.

**ಪತ್ರದಲ್ಲಿ ಏನಿದೆ?:** ಸದನದಲ್ಲಿ ಡಿ.15 ರಂದು ನಡೆದ ಅಹಿತಕರ ಘಟನೆ ಸಂಬಂಧ ಆಡಳಿತ ಪಕ್ಷದ ಸದಸ್ಯರು ಸಭಾಪತಿಯಾದ ನನ್ನ ಸದನ ಪ್ರವೇಶಕ್ಕೆ ನಿರ್ಬಂಧ ವಿಧಿಸಿರುವುದು ಸೇರಿ ಸದನದ ಕಾರ್ಯಕಲಾಪಗಳಿಗೆ ವ್ಯತಿರಿಕ್ತವಾಗಿ ನಿಯಮಾವಳಿಗಳನ್ನು ಗಾಳಿಗೆ ತೂರಿ ನಡೆದುಕೊಂಡ ಘಟನೆಗಳು ವಿವಿಧ ಸಮೂಹ ಮಾಧ್ಯಮಗಳಲ್ಲಿ ಮತ್ತು ಪತ್ರಿಕೆಗಳಲ್ಲಿ ವ್ಯಾಪಕವಾಗಿ ಟೀಕೆಗೆ ಒಳಗಾಗಿದೆ. ಇದರಿಂದ ಶತಮಾನದ ಇತಿಹಾಸವುಳ್ಳ ವಿಧಾನಪರಿಷತ್‌ನ ಗೌರವ, ಸಂಪ್ರದಾಯ ಹಾಗೂ ಪರಂಪರೆಗೆ ಧಕ್ಕೆಯಾಗಿರುತ್ತದೆ. ನಿಮ್ಮ ವರ್ತನೆಯನ್ನು ವಿಧಾನಮಂಡಲದ ನೌಕರನಿಗೆ ತಕ್ಕುದಲ್ಲದ ರೀತಿಯಲ್ಲಿದೆ. ನಿಯಮಬಾಹಿರ, ಕರ್ತವ್ಯ ನಿರ್ಲಕ್ಷ್ಯ, ಬೇಜವಾಬ್ದಾರಿ ಮತ್ತು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಅಧಿಕಾರ ವ್ಯಾಪ್ತಿ ಮೀರಿರುವ ನಿಮ್ಮ ವಿರುದ್ಧ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿ ಅಡಿಯಲ್ಲಿ ಏಕೆ ಕ್ರಮ ಜರುಗಿಸಬಾರದು ಎಂದು ನೋಟಿಸ್‌ನಲ್ಲಿ ಕೇಳಿದ್ದಾರೆ.